ರಾಜ್ಯದ ಕೆರೆಗಳ ಹೂಳೆತ್ತುವುದು.

2453 (2870) :— ಶ್ರೀ ಬಿ. ಸೋಮಶೇಖರ್ (ಮಳವಳ್ಳಿ) :— ಮಾನ್ಯ ಸಣ್ಣ ನೀರಾವರಿ ರಾಜ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ.

ಅ) ರಾಜ್ಯದಲ್ಲಿ ಹೂಳೆತ್ತಬೇಕಾಗಿರುವ ಕೆರೆಗಳ ಒಟ್ಟು ಸಂಖ್ಯೆ ಎಷ್ಟು ; (ಜಿಲ್ಲಾವಾರು ಮಾಹಿತಿ ನೀಡುವುದು)

ಆ) ಈ ಕೆರೆಗಳ ಹೂಳನ್ನು ಸಾಮೂಹಿಕ ಕ್ರಮದಿಂದ ಯಾವಾಗ ತೆಗೆಯಲಾಗುವುದು. ಈ ಕೆರೆಗಳಲ್ಲಿ ಶೇಖರಣೆಯಾಗಿರುವ ದೂಳಿನ ಪ್ರಮಾಣ ಎಷ್ಟು? ಇದರಿಂದ ಪೋಲಾಗುತ್ತಿರುವ ನೀರಿನ ಪ್ರಮಾಣ ಎಷ್ಟು?

ಇ) ಇದರಿಂದ ಎಷ್ಟು ಎಕರೆ ಕೆರೆ ನೀರಾವರಿ ಪ್ರದೇಶ ಕಡಿಮೆಯಾಗಿದೆ?

ಶ್ರೀ ಎಸ್. ಕುಮಾರ್ ಬಂಗಾರಪ್ಪ (ಸಣ್ಣ ನೀರಾವರಿ ರಾಜ್ಯ ಸಚಿವರು) :—

ಸಣ್ಣ ನೀರಾವರಿ ವ್ಯಾಪ್ತಿಯಲ್ಲಿರುವ 3322 ಕೆರೆಗಳ ಬಹುತೇಕ ಎಲ್ಲಾ ಕೆರೆಗಳಲ್ಲಿ ವಿವಿಧ ಪ್ರಮಾಣದಲ್ಲಿ ದೂಳು ತುಂಬಿರುತ್ತದೆ.

ಆ) ರೈತರ ಸಹಭಾಗಿತ್ವದಲ್ಲಿ ಕೆರೆಗಳಲ್ಲಿ ಹೂಳೆತ್ತುವ ಕಾರ್ಯಕ್ರಮವನ್ನು 1998-99ನೇ ಸಾಲಿನಿಂದ ಆಯವ್ಯಯದಲ್ಲಿ ಒದಗಿಸಿರುವ ಅನುದಾನಕ್ಕೆ ಅನುಗುಣವಾಗಿ ಕೈಗೊಳ್ಳಲಾಗುತ್ತಿದೆ. ಈ ಕೆರೆಗಳಲ್ಲಿ ನೀರು ಶೇಖರಣಾ ಸಾಮರ್ಥ್ಯದ ಶೇಕಡಾ 20 ರಿಂದ 40 ರಷ್ಟು ಪ್ರಮಾಣದಲ್ಲಿ ದೂಳು ತುಂಬಿದ್ದು ಈ ಪ್ರಮಾಣದ ನೀರಿನ ಶೇಖರಣಾ ಸಾಮರ್ಥ್ಯ ಕಡಿಮೆ ಆಗಿರುತ್ತದೆ. ಇದರಿಂದಾಗಿ ಈ ಕೆರೆಗಳ ಒಟ್ಟಾರೆ ಆಚ್ಚುಕಟ್ಟಿಗೆ ಶೇ. 20 ರಿಂದ 40 ರಷ್ಟು ವಿಸ್ತೀರ್ಣ ನೀರಾವರಿ ಪ್ರದೇಶ ಕಡಿಮೆಯಾಗಿದೆ.

ರಾಜ್ಯದಲ್ಲಿ ಶಿಶುಗಳ ಮಾರಾಟ

2454 (2914) ಶ್ರೀ ಬಿ. ಸೋಮಶೇಖರ್ (ಮಳವಳ್ಳಿ) :— ಮಾನ್ಯ ಗೃಹ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ.

ಅ) ರಾಜ್ಯದಲ್ಲಿ ಹೆಚ್ಚಾಗಿ ಶಿಶುಗಳು ಮಾರಾಟವಾಗುತ್ತಿರುವ ಬಗ್ಗೆ ಸರ್ಕಾರದ ಗಮನಕ್ಕೆ ಬಂದಿದೆಯೆ ;

ಆ) ಹಾಗಿದ್ದಲ್ಲಿ, ಕಳೆದ ಒಂದು ವರ್ಷದಲ್ಲಿ ಎಷ್ಟು ಶಿಶುಗಳ ಮಾರಾಟ ಪ್ರಕರಣ ಪತ್ತೆ ಹಚ್ಚಲಾಗಿದೆ. (ಜಿಲ್ಲಾವಾರು ವಿವರ ನೀಡುವುದು);